# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 11ನೇ ಫೆಬ್ರವರಿ, 2015**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಪ್ರಶ್ನೋತ್ತರ

| | | | |
|---|---|---|---|
| ಅ. | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ಏಳನೆಯ ಪಟ್ಟಿ** |
| ಆ. | **ತಡೆಹಿಡಿಯಲಾದ ಪ್ರಶ್ನೆಗಳು:** | | |
| | 01) 1ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 9(35)<br>02) 5ನೇ ಪಟ್ಟಿಯಿಂದ ತಡೆಯಿಡಿಯಲಾದ ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 62(745) | | **ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು** |
| | 03) 2ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಟಿ. ಜಾನ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 26(190) | | **ಮಾನ್ಯ ಕಂದಾಯ ಸಚಿವರು** |
| | 04) 6ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಬಿ.ರಾಮಕೃಷ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 85(815) | | **ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** |
| ಇ. | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ಏಳನೆಯ ಪಟ್ಟಿ** |

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

01) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2014

02) ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014

## ೦೩. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2014**

**ಶ್ರೀ ಆರ್.ವಿ. ದೇಶಪಾಂಡೆ** (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

೦1. ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2014ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

೦2. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**II. ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014**

**ಶ್ರೀ ಬಿ. ರಮಾನಾಥ ರೈ** (ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-

೦1. ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2014ನೇ ಸಾಲಿನ ಕರ್ನಾಟಕ ಸರೋವರಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

೦2. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦4. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ರಾಮಚಂದ್ರಗೌಡ** ಅವರು 2007ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಹೊಸ ಪ್ರದೇಶಗಳು ಸೇರಿದ್ದರೂ ಸಹ ಸರ್ಕಾರಿ ಶಾಲೆ, ಆಸ್ಪತ್ರೆಗಳು, ಸರ್ಕಾರಿ ಆಸ್ತಿ ಮತ್ತು ನಾಗರೀಕ ಸೇವಾ ನಿವೇಶನಗಳು ಈವರೆವಿಗೂ ಪಾಲಿಕೆ ವ್ಯಾಪ್ತಿಗೆ ಹಸ್ತಾಂತರವಾಗದಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಆ) ಶ್ರೀ ಟಿ.ಎ. ಶರವಣ** ಅವರು ತಿರುಪತಿ-ತಿರುಮಲ ದೇವಸ್ಥಾನದಲ್ಲಿನ ಕರ್ನಾಟಕ ಸರ್ಕಾರದ ಆಸ್ತಿಯನ್ನು ಆಂಧ್ರ ಸರ್ಕಾರದವರು ವಶಪಡಿಸಿಕೊಂಡಿರುವುದರಿಂದ, ಭಕ್ತಾದಿಗಳಿಗೆ ಉಂಟಾಗಿರುವ ಸಮಸ್ಯೆಯ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ** ಗಮನ ಸೆಳೆಯುವುದು.

## ೦೫. ನಿಯಮ ೩೩೦ರ ಮೇರೆಗೆ

**ಶ್ರೀಮತಿ ಮೋಟಮ್ಮ** ಅವರು ರಾಜ್ಯ ಮಹಿಳಾ ಪುನರ್ವಸತಿ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

## ೦೬. ನಿಯಮ ೬೮ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ

**ಶ್ರೀಯುತರುಗಳಾದ:**
**ಬಿ.ಜೆ. ಪುಟ್ಟಸ್ವಾಮಿ**
**ಕೆ.ಎಸ್. ಈಶ್ವರಪ್ಪ, ವಿ.ಪ.ನಾ**
**ಹಾಗೂ**
**ಕೆ.ಬಿ. ಶಾಣಪ್ಪ**

} ಸಹಕಾರ ಸಂಘಗಳ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಮೀಸಲಾತಿಯಲ್ಲಿ ವಂಚನೆ ಮಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಭೋಜನ ವಿರಾಮದ ನಂತರ**

## ೦೭. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"೨೦೧೫ನೇ ಫೆಬ್ರವರಿ, ೦೨ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: ೦೪.೦೨.೨೦೧೫ರಂದು ಡಾ: ಮತ್ತಿಕಟ್ಟಿ ವೀರಣ್ಣರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ:

(ಮೂರನೇ ದಿನ)

**ವಿ. ಶ್ರೀಶ್**
**ಕಾರ್ಯದರ್ಶಿ**

---